# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

# ಟಿ. ನರಸೀಪುರ.

# ಸಿ. ಸಿ ನಂ. 802/2024

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿಃ ಬಿಳಿಗಿರಿ ಬಿನ್ ಲೇಟ್ ರಂಗಯ್ಯ, 60 ವರ್ಷ,
ವಾಸಃ ಎಂ,ಎಂ ರಸ್ತೆ, ರಾಮಮಂದಿರದ ಪಕ್ಕ,
ಬನ್ನೂರು ಟೌನ್, ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 23.05.2024 ರಂದು ಸಂಜೆ 8.30 ಗಂಟೆಗೆ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯಲ್ಲಿ ಚಾಸಾ-1 ಸತೀಶ ಬಿ.ಎನ್ ರವರು ಎಂ.ಎಂ.ರಸ್ತೆ ಬಳಿ ಇರುವ ಗಾಣಿಗೇರಿ ಮೊಹಲ್ಲದ ಸೈಟ್ ಬಳಿ ಹೋಗಿದ್ದಾಗ ಆರೋಪಿಯಾದ ನೀವು ಚಾಸಾ-1ರವರ ಜಾಗದಲ್ಲಿ ದಿನಾಂಕ 12.10.2023 ರಂದು ಶೆಡ್ ನಿರ್ಮಿಸಿದ್ದ ವಿಚಾರವಾಗಿ ಬನ್ನೂರು ಠಾಣೆಯಲ್ಲಿ ನನ್ನ ಮೇಲೆ ದೂರು ಕೊಟ್ಟಿದ್ದಿಯಾ ಈಗ ಏಕೆ ಜಾಗದ ಹತ್ತಿರ ಬಂದಿದ್ದಿಯಾ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-1 ಸತೀಶ ಬಿ,ಎನ್ ರವರು ಏಕೆ ಬೈಯುತ್ತಿಯಾ ಈ ಜಾಗ ನನಗೆ ಸೇರಬೇಕಾಗಿದ್ದು ಎಂದು ಹೇಳಿದ್ದಕ್ಕೆ ಏಕಾಏಕಿ ಚಾಸಾ-1ರವರ ಸೈಟ್ ಗೆ ಅತಿಕ್ರಮ ಪ್ರವೇಶ

ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.447 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ–1 ಸತೀಶ ಬಿ,ಎನ್ ರವರನ್ನು ಹಿಡಿದು ಮುಂದೆ ಹೋಗದಂತೆ ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.341 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ–1 ಸತೀಶ ಬಿ,ಎನ್ ರವರನ್ನು ಇನ್ನೊಮ್ಮೆ ಈ ಜಾಗದ ಬಳಿ ಬಂದರೆ ನಿನ್ನನ್ನು ಕೊಲೆ ಮಾಡಿ ಸಾಯಿಸುತ್ತೇನೆ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **22.01.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## ಆರೋಪಿತರ ಹೇಳಿಕೆ

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕ್ಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿ ಸಹಿ**